# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : 32(81) |
| ಸದಸ್ಯರ ಹೆಸರು | : ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 15.07.2024. |
| ಉತ್ತರಿಸುವ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಪಡಿಸಿ ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಕಾರಣವೇನು; ಯಾವ ವರ್ಷಗಳಿಂದ ಜಾರಿಗೆ ತರಲು ಉದ್ದೇಶಿಸಲಾಗಿದೆ; (ವಿವರ ನೀಡುವುದು) | ಕರ್ನಾಟಕ ರಾಜ್ಯ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶಾಲಾ ಮತ್ತು ಉನ್ನತ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ನೂತನ ನಿಯಮಗಳನ್ನು ಜಾರಿಗೊಳಿಸಲು ಗುಣಮಟ್ಟ ಶಿಕ್ಷಣವು ಎಲ್ಲರಿಗೂ ಲಭ್ಯವಾಗುವಂತೆ ಸಮಾನವಾದ ಅವಕಾಶಗಳನ್ನು ಕಲ್ಪಿಸುವುದರ ಮುಖಾಂತರ ಶಿಕ್ಷಣದ ಪ್ರಮುಖ ಗುರಿಯನ್ನು ಸಾಧಿಸುವುದಕ್ಕೆ ರಾಜ್ಯ ಶಿಕ್ಷಣ ನೀತಿಯನ್ನು ರಚಿಸಲು ರಾಜ್ಯವು ಮುಂದಾಗಿದೆ. ಇದರೊಂದಿಗೆ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಜ್ಞಾನದೊಂದಿಗೆ ಪ್ರಜಾಪ್ರಭುತ್ವ ಮೌಲ್ಯಗಳನ್ನು, ಅಗತ್ಯ ಕೌಶಲ್ಯಗಳನ್ನು ಬೆಳೆಸುತ್ತಾ, ಮೌಲ್ಯ ಶಿಕ್ಷಣದ ಮೂಲಕ ಔದ್ಯೋಗಿಕ ಮನೋಭಾವನೆಯನ್ನು ವೃದ್ಧಿಸಿ ಉತ್ತಮ ಪೌರತ್ವ ಗುಣಗಳನ್ನು ಬೆಳೆಸುವುದೇ ಈ ನೀತಿಯ ಗುರಿಯಾಗಿರುತ್ತದೆ.<br>ಈ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಇಡಿ 166 ಯುಎನ್ಇ 2023, ದಿನಾಂಕ:11.10.2023ರಂದು ಹೊರಡಿಸಲಾಗಿದ್ದು, ಈ ಬಗ್ಗೆ 13 ಅನುಷ್ಠಾನ ಕಾರ್ಯ ಪಡೆಗಳನ್ನು ರಚಿಸಿ ಕಾರ್ಯಕೈಗೋಳ್ಳಲಾಗುತ್ತಿದೆ. |
| ಆ) | ರಾಜ್ಯದ ಸರ್ಕಾರಿ ಮತ್ತು ರಾಜ್ಯ ಸರ್ಕಾರದ ಮಂಡಳಿಗಳ ಅಧೀನಕ್ಕೆ ಒಳಪಟ್ಟ ಶಾಲೆಗಳಿಗೆ ಮಾತ್ರವೇ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ಯೋಚಿಸಲಾಗಿದೆಯೇ; ಹಾಗಿದ್ದಲ್ಲಿ, ರಾಜ್ಯದಲ್ಲಿ ಸಿ.ಬಿ.ಎಸ್.ಇ ಮತ್ತು ಎಸ್.ಇ.ಬಿ ಪಠ್ಯಕ್ರಮ ಅಭ್ಯಾಸ ಮಾಡಿದ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತೊಂದರೆಯಾಗದಿರಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು) | • ಪ್ರಸ್ತುತ ರಾಜ್ಯ ಶಿಕ್ಷಣ ನೀತಿ ಆಯೋಗವು ಕಾರ್ಯಪ್ರವೃತ್ತವಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮಾಡಬಹುದಾದ ಬದಲಾವಣೆಗಳ ಕುರಿತು ಅಗತ್ಯ ಸೂಚನೆ ಮತ್ತು ಸಲಹೆಗಳನ್ನು ನೀಡಲಿದೆ. ಸದರಿ ಆಯೋಗದ ಶಿಫಾರಸ್ಸಿನನ್ವಯ ರಾಜ್ಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಬಗ್ಗೆ ಯೋಜಿಸಲಾಗುವುದು.<br>• ರಾಜ್ಯ ಹಾಗೂ ರಾಷ್ಟ್ರೀಯ ಪಠ್ಯಕ್ರಮಗಳು ವಯೋಮಿತಿಗೆ ಅನುಗುಣವಾಗಿ ಹಾಗೂ ತರಗತಿಗನುಗುಣವಾದ ಕಲಿಕಾ ಫಲಗಳು, ಕಲಿಕಾ ಪದ್ಧತಿ ಹಾಗೂ ಮೌಲ್ಯಮಾಪನ ವೈಜ್ಞಾನಿಕವಾಗಿ ಒಂದೇ ಅನುಸರಿಸುವುದರಿಂದ ಯಾವುದೇ ಪಠ್ಯಕ್ರಮ ಅಭ್ಯಾಸ ಮಾಡಿದರೂ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತೊಂದರೆಯಾಗುವುದಿಲ್ಲ. |

| | | |
|---|---|---|
| ಇ) | ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಯಾವ್ಯಾವ ಶಿಕ್ಷಣ ತಜ್ಞರಿಂದ (ರಾಜ್ಯ ಹೊರರಾಜ್ಯ) ಸಲಹೆ ಸೂಚನೆ ಪಡೆಯಲಾಗಿದೆ ಮತ್ತು ಇದುವರೆಗೂ ಎಸ್.ಇ.ಪಿ ಜಾರಿಗಾಗಿ ಶಿಕ್ಷಣ ತಜ್ಞರು/ಇಲಾಖೆ ನಡೆಸಿರುವ ಸಭಾ ನಡುವಳಿಗಳ ಮಾಹಿತಿಯನ್ನು ನೀಡುವುದು. | ರಾಜ್ಯ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಸಂಬಂಧ ಶಿಕ್ಷಣ ಕ್ಷೇತ್ರಕ್ಕೆ ಸಲಹೆ ಮಾರ್ಗದರ್ಶನವನ್ನು ನೀಡಲು ಹಲವಾರು ತಜ್ಞರನ್ನು ಒಳಗೊಂಡಂತೆ ಪ್ರೊ.ಸುಖದೇವ್ ಥೋರಟ್ ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ರಚಿಸಲಾಗಿದೆ.<br>ಮುಂದುವರೆದು, ಶಿಕ್ಷಣದ ವಿವಿಧ ಕ್ಷೇತ್ರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶಿಫಾರಸ್ಸುಗಳನ್ನು ನೀಡಲು ಸಂಚಾಲಕರ ನೇತೃತ್ವದಲ್ಲಿ 13 ಅನುಷ್ಠಾನ ಕಾರ್ಯಪಡೆಗಳನ್ನು ರಚಿಸಲಾಗಿದೆ. ಸದರಿ ಕಾರ್ಯಪಡೆಗಳ ಸಭೆಗಳಲ್ಲಿ ಶಿಕ್ಷಣ ಕ್ಷೇತ್ರದ ಹಲವಾರು ತಜ್ಞರು, ಭಾಗಿದಾರರೊಡನೆ ಹಾಗೂ ಇಲಾಖಾ ಪ್ರತಿನಿಧಿಗಳೊಡನೆ ಚರ್ಚಿಸಿ ತೀರ್ಮಾನಗಳನ್ನು ಕೈಗೊಳ್ಳಲಾಗುತ್ತಿದೆ. ಸದ್ಯದಲ್ಲೇ ಕಾರ್ಯಪಡೆಗಳು ತಮಗೆ ಸಂಬಂಧಪಟ್ಟ ಕ್ಷೇತ್ರಗಳ ವರದಿಗಳನ್ನು ಅಂತಿಮಗೊಳಿಸಿ ರಾಜ್ಯ ಶಿಕ್ಷಣ ನೀತಿ ಆಯೋಗದ ಅಧ್ಯಕ್ಷರಿಗೆ ಸಲ್ಲಿಸಲಿದ್ದಾರೆ. |
| ಈ) | ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಯಾವ ಯಾವ ಮೂಲ ಸೌಕರ್ಯಗಳ ಕ್ರೂಢೀಕರಣ ಯಾವ ಹಂತದಲ್ಲಿದೆ? (ವಿವರ ನೀಡುವುದು). | ರಾಜ್ಯ ಶಿಕ್ಷಣ ನೀತಿ ರಚನಾ ಕಾರ್ಯ ಪ್ರಗತಿಯಲ್ಲಿದ್ದು, ಪೂರ್ಣಗೊಂಡ ನಂತರ ಜಾರಿಗೆ ಕ್ರಮವಹಿಸಲಾಗುವುದು. |

ಸಂಖ್ಯೆ: ಇಪಿ 195 ಪಿಜಿಸಿ 2024

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು